# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 312
ಸದಸ್ಯರ ಹೆಸರು : ಡಾ: ಚಂದ್ರಶೇಖರ ಬಿ.ಪಾಟೀಲ್
ಉತ್ತರಿಸಬೇಕಾದ ದಿನಾಂಕ : 23-09-2020.
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖಾ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೋರ್ಟ್ ಆದೇಶದ ಮೇಲೆ ಮೊರಾರ್ಜಿ ವಸತಿ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಬೋಧಕರ ಜೀವನ ಅತಂತ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಯಾವ ಕಾಲಮಿತಿಯಲ್ಲಿ ಬಗೆಹರಿಸಲಾಗುವುದು? | ಹೌದು<br><br>ಮಾನ್ಯ ಉಚ್ಛ ನ್ಯಾಯಾಲಯದ ತೀರ್ಪ ರಿಟ್ ಪಿಟಿಷನ್:20204-20364/2011 ಮತ್ತು W.A.5127/2012 ರನ್ವಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಹೊರಸಂಪನ್ಮೂಲ ಏಜೆನ್ಸಿಯಿಂದ ಕಾರ್ಯನಿರ್ವಹಿತ್ತಿದ್ದ ಬೋಧಕ ಸಿಬ್ಬಂದಿಗೆ 2004-05 ರಿಂದ 2010-11 ರವರೆಗೆ ಸೇವಾ ಕೃಪಾಂಕವನ್ನು ನೀಡಿ ಆಯ್ಕೆಗೆ ಅರ್ಹರಾದ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲಾಗಿರುತ್ತದೆ.<br>ನಿಯಮಾನುಸಾರ ಸೇವಾ ಕೃಪಾಂಕ ನೀಡಿದ್ದರೂ ಆಯ್ಕೆಯಾಗದ ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹೊರಸಂಪನ್ಮೂಲ ಬೋಧಕ ಸಿಬ್ಬಂದಿಗಳು ಸೇವಾ ಕೃಪಾಂಕ ನೀಡುವ ಸಂಬಂಧ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್:19714/2018 ಹಾಗೂ ಇನ್ನಿತರ ಸಂಯೋಜಿತ ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ. ನ್ಯಾಯಾಲಯದ ಅಂತಿಮ ಆದೇಶವಾದ ನಂತರ ಅದರನ್ವಯ ಕ್ರಮವಹಿಸಲಾಗುವುದು. |

ಸಂಖ್ಯೆ: ಸಕಇ 295 ಮೊದೇಶಾ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ
ಸಮಾಜ ಕಲ್ಯಾಣ ಇಲಾಖಾ ಸಚಿವರು.